ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿನ ಪ್ರಶ್ನೆ ಸಂಖ್ಯೆ	: **03 (172)**
ಸದಸ್ಯರ ಹೆಸರು	: ಶ್ರೀ. ಕೆ. ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	: 07.12.2020
ಉತ್ತರಿಸುವ ಸಚಿವರು	: ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
ಅ.	2019-20ನೇ ಸಾಲಿನಲ್ಲಿ ಪ್ರೌಢ ಶಿಕ್ಷಣ ಮಂಡಳಿಯು ನಡೆಸಿದ ಪರೀಕ್ಷೆಯ ಮೌಲ್ಯ ಮಾಪನದಲ್ಲಿ ಲೋಪದೋಷ ಕಂಡು ಬಂದಿದ್ದು ಇದರಿಂದ ಹಲವಾರು ವಿದ್ಯಾರ್ಥಿಗಳಿಗೆ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಈ ಕುರಿತಂತೆ ಸರ್ಕಾರ ಕೈಗೊಂಡ ಕ್ರಮಗಳೇನು?	2019-20ನೇ ಸಾಲಿನ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯು ಕೋವಿಡ್-19ರ ಹಿನ್ನೆಲೆಯಲ್ಲಿ ಮಾರ್ಚ್/ಏಪ್ರಿಲ್ ಮಾಹೆಯಿಂದ ಮುಂದೂಡಲ್ಪಟ್ಟು ದಿನಾಂಕ: 25-06-2020 ರಿಂದ 04-07-2020 ರವರೆಗೆ ರಾಜ್ಯಾದ್ಯಂತ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಎಸ್.ಓ.ಪಿ ಆಧರಿಸಿ ಮುನ್ನೆಚ್ಚರಿಕೆಗಳೊಂದಿಗೆ ಯಶಸ್ವಿಯಾಗಿ ನಡೆಸಲಾಯಿತು. ಕೋವಿಡ್-19ರ ಹಿನ್ನೆಲೆಯಲ್ಲಿ ಜಿಲ್ಲಾ ಮೌಲ್ಯಮಾಪನ ಕೇಂದ್ರಗಳಿಗೆ ಪ್ರಕಟಿಸಿದ್ದ ಎಸ್.ಓ.ಪಿ. ಅನ್ವಯ ಎಲ್ಲಾ ರೀತಿಯ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಂಡು ಎಸ್.ಎಸ್.ಎಲ್.ಸಿ ಪರೀಕ್ಷೆಯ ಉತ್ತರಪತ್ರಿಕೆಗಳ ಮೌಲ್ಯಮಾಪನ ಕಾರ್ಯವನ್ನು ರಾಜ್ಯದ 34 ಶೈಕ್ಷಣಿಕ ಜಿಲ್ಲಾ ಕೇಂದ್ರಗಳಲ್ಲಿ ನಡೆಸಿ, ವಿದ್ಯಾರ್ಥಿಗಳಿಗೆ ಫಲಿತಾಂಶವನ್ನು ನೀಡಲಾಯಿತು. ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸಿದ ಪರೀಕ್ಷೆಯ ಮೌಲ್ಯಮಾಪನದಲ್ಲಿ ಯಾವುದೇ ಲೋಪದೋಷಗಳಾಗದಂತೆ ಮೌಲ್ಯಮಾಪನವನ್ನು ನಡೆಸಲಾಗಿದೆ. ಆದಾಗ್ಯೂ 16971 ವಿದ್ಯಾರ್ಥಿಗಳು ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಿರುತ್ತಾರೆ. • ಮೇಲ್ಕಂಡ 16971 ಅರ್ಜಿಗಳಲ್ಲಿ 06 ಕ್ಕಿಂತ ಕಡಿಮೆ ಅಂಕ ವ್ಯತ್ಯಾಸವಾಗಿರುವ ಪ್ರಕರಣಗಳು **12055** ಸಂಖ್ಯೆಯಲ್ಲಿರುತ್ತದೆ. ಒಬ್ಬ ಮೌಲ್ಯಮಾಪಕರಿಗೂ ಮತ್ತೊಬ್ಬ ಮೌಲ್ಯಮಾಪಕರಿಗೂ ಆಲೋಚನೆಗಳು ವಿಭಿನ್ನವಾಗಿದ್ದು, 01-02 ಅಂಕಗಳನ್ನು ವಿದ್ಯಾರ್ಥಿಗಳ ಬರವಣಿಗೆಗನುಸಾರವಾಗಿ ಹೆಚ್ಚು ಅಥವಾ ಕಡಿಮೆ ನೀಡುವ ಸಾಧ್ಯತೆ ಇರುತ್ತದೆ. ಈ ರೀತಿಯ ವ್ಯತ್ಯಾಸಗಳನ್ನು ವಿದ್ಯಾರ್ಥಿಗಳ ಕೋರಿಕೆಯನ್ವಯ ಮರುಮೌಲ್ಯಮಾಪನದಲ್ಲಿ ಪರಿಶೀಲಿಸಿ ಸ್ವಲ್ಪವೂ ಲೋಪವಾಗದಂತೆ ಸರಿಪಡಿಸಲಾಗಿದೆ. • 06 ಕ್ಕಿಂತ ಹೆಚ್ಚು ಅಂಕ ವ್ಯತ್ಯಾಸವಿರುವ ಪ್ರಕರಣಗಳ **3882** ಸಂಖ್ಯೆಯಲ್ಲಿರುತ್ತದೆ. ಈ ರೀತಿಯ ವ್ಯತ್ಯಾಸಗಳನ್ನು ಮರುಮೌಲ್ಯಮಾಪನದಲ್ಲಿ ಸಂಪೂರ್ಣ ಸರಿಪಡಿಸಲಾಗಿದೆ. ಮತ್ತು ಈ ರೀತಿ ಅಸಮರ್ಪಕ ಮೌಲ್ಯಮಾಪನ ಮಾಡಿರುವ ಮೌಲ್ಯಮಾಪಕರುಗಳಿಗೆ ದಂಡ ವಿಧಿಸಲು ಕ್ರಮವಹಿಸಲಾಗಿದೆ. ಮತ್ತು 06 ಕ್ಕಿಂತ ಹೆಚ್ಚು ಅಂಕ ವ್ಯತ್ಯಾಸವಾಗಿರುವ ವಿದ್ಯಾರ್ಥಿಗಳಿಗೆ ಪಾವತಿಸಿರುವ ಶುಲ್ಕವನ್ನು ಸಹ ಮರುಭರಣ ಮಾಡುವ ಕ್ರಮಕೈಗೊಳ್ಳಲಾಗಿದೆ.

		ಯಾವುದೇ ವ್ಯತ್ಯಾಸವಿಲ್ಲದಿದ್ದರೂ ಅರ್ಜಿ ಸಲ್ಲಿಸಿರುವ ಪ್ರಕರಣಗಳನ್ನು ಪರಿಶೀಲಿಸಿ ವಿಲೇ ಮಾಡಲಾಗಿದೆ. 1034

ಸಂಖ್ಯೆ: ಇಪಿ 209 ಎಸ್‌ಎಲ್‌ಬಿ 2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ
ಸಕಾಲ ಸಚಿವರು